# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಐ.ಹೆಚ್.ಮುಜಾವರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಕುರುವತ್ತಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ:

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂಖ್ಯೆ: Compt/UPLOK/BGM/2191/2017/DRE-4, ದಿನಾಂಕ: 09.10.2018

ಪ್ರಸ್ತಾವನೆ:

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 22.09.2018ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಹಾವೇರಿ ಪಟ್ಟಣದ ನಿವಾಸಿಯಾದ ಶ್ರೀ ಜೆ.ಎಂ.ರಾಜಶೇಖರ್ ಬಿನ್ ಜಯದೇವಯ್ಯ ಮಠದ (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಒಂದರಿಂದ 3ನೇ ಎದುರುದಾರಿಗೆ 4 ಮತ್ತು 5ನೇ ಎದುರುದಾರರ ಆಸ್ತಿಗಳ ವಿವರಗಳು ತಿಳಿದಿದ್ದರೂ, ವಸತಿ ರಹಿತರಿಗೆ ಸಲ್ಲಬೇಕಾಗಿದ್ದ ವಸತಿ ಯೋಜನೆಯ ಸೌಲಭ್ಯವನ್ನು ಎದುರುದಾರರುಗಳು ಒಳಸಂಚು ಮಾಡಿಕೊಂಡು 5ನೇ ಎದುರುದಾರರನ್ನು ಸದರಿ ಯೋಜನೆಯ ಫಲಾನುಭವಿಯಾಗಿ ಆಯ್ಕೆ ಮಾಡಿದ್ದಾರೆಂದು ದೂರು ಸಲ್ಲಿಸಿದ್ದು, ಸದರಿ ದೂರಿನಲ್ಲಿ 1) ತಹಶೀಲ್ದಾರರಾದ ಶ್ರೀ ರಾಮಮೂರ್ತಿ, 2) ಕುರುವತ್ತಿ ಗ್ರಾಮ ಪಂಚಾಯತಿಯ ಕಾರ್ಯದರ್ಶಿಯಾಗಿದ್ದ ಶ್ರೀ ಐ.ಹೆಚ್.ಮುಜಾವರ (ನಿವೃತ್ತ), 3) ಕಂಚಾರಗಟ್ಟಿ ಗ್ರಾಮ ಪಂಚಾಯತ್‌ನ ಕಾರ್ಯದರ್ಶಿಯಾಗಿದ್ದ ಆರ್.ಎಫ್.ನದಾಫ್ ಹಾಗೂ ಚೌಡಯ್ಯದಾನಪುರದ ನಿವಾಸಿಗಳಾದ 4) ಶ್ರೀ ಸಂಕಪ್ಪ ಈರಪ್ಪ ಅರಸಪ್ಪನವರ (ಅರಸನಾಳ) ಮತ್ತು 5) ಶ್ರೀಮತಿ ಸುವರ್ಣ ಉರುಫ್ ಚಿಕ್ಕಮ್ಮ ಕೋಂ ಸಂಕಪ್ಪ ಅರಸನಾಳ (ಅರಸಪ್ಪನವರ) (4 ಮತ್ತು 5ನೇ ಎದುರುದಾರರ ಖಾಸಗಿ ವ್ಯಕ್ತಿಗಳಾಗಿರುತ್ತಾರೆ) (ಇನ್ನು ಮುಂದೆ 1 ರಿಂದ 5ನೇ ಎದುರುದಾರರು ಎಂದು ಕ್ರಮವಾಗಿ ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯಲೋಪ ಮತ್ತು ದುರ್ನಡತೆಯ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರಡಿಯಲ್ಲಿ ತೆಗೆದುಕೊಳ್ಳಲಾಗಿದೆ.

ಈ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9ರಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಹಿನ್ನೆಲೆಯಲ್ಲಿ ಎದುರುದಾರರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬರುವುದರಿಂದ, ಎದುರುದಾರರಾದ 2) ಕುರುವತ್ತಿ ಗ್ರಾಮ ಪಂಚಾಯತಿಯ ಕಾರ್ಯದರ್ಶಿಯಾಗಿದ್ದ ಶ್ರೀ ಐ.ಹೆಚ್.ಮುಜಾವರ (ನಿವೃತ್ತ), ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಹಾಗೂ ಸದರ್ರಿ ಗ್ರಾಮ ಪಂಚಾಯತಿ ಕಾರ್ಯದರ್ಶಿಯವರು ನಿವೃತ್ತಿ ಹೊಂದಿರುವುದರಿಂದ ಕ.ನಾ.ಸೇ.ನಿ. 214(2)(ಬಿ) ರಡಿ ಅನುಮತಿ ನೀಡಿ, ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಹಾಗೂ ಮಾನ್ಯ ಉಪಲೋಕಾಯುಕ್ತರ ಕಲಂ 12(1)ರ ವರದಿಯನ್ವಯ ಸರ್ಕಾರಕ್ಕೆ ಸುಳ್ಳು ಮಾಹಿತಿ ನೀಡಿ ಬಿಪಿಎಲ್ ಪಡಿತರ ಚೀಟಿ ಪಡೆದ 4ನೇ ಎದುರುದಾರರು ಮತ್ತು ಬಸವ ವಸತಿ ಯೋಜನೆಯಡಿ ಮನೆ ಮಂಜೂರು ಮಾಡಿಸಿಕೊಂಡು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದಿಂದ ಧನ ಸಹಾಯ ಪಡೆದ ಬಗ್ಗರ 5ನೇ ಎದುರುದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಹಾಗೂ 4ನೇ ಎದುರುದಾರರಿಂದ ಬಡ್ಡಿ ಹಣ ಮತ್ತು 5ನೇ ಎದುರುದಾರರಿಂದ ವಸತಿ ನಿಗಮದಿಂದ ಪಡೆದ ಸಬ್ಸಿಡಿ ಮೊತ್ತವನ್ನು ವಸೂಲಿ ಮಾಡುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ ಈ ಬಗ್ಗೆ ಕ್ರಮ ಜರುಗಿಸಿ ವರದಿ ಸಲ್ಲಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಹಾವೇರಿ ಜಿಲ್ಲಾ ಪಂಚಾಯತಿ ರವರಿಗೆ ನಿರ್ದೇಶನ ನೀಡಲಾಗಿದೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಶ್ರೀ ಐ.ಹೆಚ್.ಮುಜಾವರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಕುರುವತ್ತಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 498 ಗ್ರಾಪಂಕಾ 2018, ಬೆಂಗಳೂರು, ದಿನಾಂಕ 17.11.2018**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ ಶ್ರೀ ಐ.ಹೆಚ್.ಮುಜಾವರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಕುರುವತ್ತಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214 ರಡಿ ಸರ್ಕಾರವು ಮಂಜೂರಾತಿ ನೀಡಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ನಿಯಮ-214 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

19/11

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ ಜಿಲ್ಲೆ,
5) ಕಾರ್ಯನಿರ್ವಾಹಕ ಅಧಿಕಾರಿ, ರಾಣೆಬೆನ್ನೂರು ತಾಲ್ಲೂಕು ಪಂಚಾಯತಿ, ರಾಣೆಬೆನ್ನೂರು, ಹಾವೇರಿ ಜಿಲ್ಲೆ,
   (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ ಸ್ವೀಕೃತಿಯನ್ನು ಸರ್ಕಾಕ್ಕೆ ಸಲ್ಲಿಸಲು ತಿಳಿಸಿದೆ)
6) ಶ್ರೀ ಐ.ಹೆಚ್.ಮುಜಾವರ, ನಿವೃತ್ತ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಕುರುವತ್ತಿ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ
7) ಗಣಕ ಕೋಶ – ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.